# ಹಂಪಿ ಟೈಮ್ಸ್

HAMPI TIMES

ಸಂಪಾದಕ: ಬಸಾಪುರ ಬಸವರಾಜ
EDITOR: BASAPUR BASAVARAJA

ಕನ್ನಡ ದಿನಪತ್ರಿಕೆ
KANNADA DAILY

epaper.hampitimes.com | e-mail: hampitimes@gmail.com | M:94486 33038






ಸಂಪುಟ:02 Volume:02 • ಸಂಚಿಕೆ: 92 Issue: 92 • ಪಿ.ಆರ್.ಜಿ.ಐ.ನಂ.:KARKAN/2023/88055 PRGI No:KARKAN/2023/88055 • ವಿಜಯನಗರ VIJAYANAGARA • 05.10.2024 05.10.2024 • ಶನಿವಾರ Saturday • ಪುಟ:04 Page:04 • ಬೆಲೆ:2 Rs:2







## ಐಎಎಸ್, ಕೆಎಎಸ್ ಪೂರ್ವ ಭಾವಿ ತರಬೇತಿಗೆ ಪ್ರವೇಶ ಪರೀಕ್ಷೆ: ನಿಷೇದಾಜ್ಞೆ ಜಾರಿ

**ಹಂಪಿ ಟೈಮ್ಸ್ ಹೊಸಪೇಟೆ**

ಅಕ್ಟೋಬರ್ 06ರಂದು ವಿಜಯನಗರ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ನಡೆಸುವ ಐಎಎಸ್, ಕೆಎಎಸ್ ಪೂರ್ವಭಾವಿ ತರಬೇತಿಗೆ ಸಾಮಾನ್ಯ ಪ್ರವೇಶ ಪರೀಕ್ಷೆಯ ಸಂಬಂಧ ಪರೀಕ್ಷಾ ಕೇಂದ್ರ ಸುತ್ತ–ಮುತ್ತ 200 ಮೀಟರ್ ವ್ಯಾಪ್ತಿಯೊಳಗೆ ನಿಷೇದಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿಗಳಾದ ಎಂ.ಎಸ್.ದಿವಾಕರ ಅವರು ಆದೇಶ ಹೊರಡಿಸಿದ್ದಾರೆ.

ಬೆಂಗಳೂರು ನಿರ್ಮಿಸಿರುವ ಹಜ್ ಭವನದಲ್ಲಿ ಅಲ್ಪಸಂಖ್ಯಾತರ ಅಭ್ಯರ್ಥಿಗಳಿಗೆ 10 ತಿಂಗಳ ವಸತಿ ಸಹಿತ ಐಎಎಸ್ ಮತ್ತು ಕೆಎಎಸ್ ಪರೀಕ್ಷಾ ಪೂರ್ವ ತರಬೇತಿ ನೀಡಲು ಘೋಷಿಸಿರುತ್ತಾರೆ. ಪೂರ್ವಭಾವಿ ತರಬೇತಿಗೆ ಸಾಮಾನ್ಯ ಪ್ರವೇಶ ಪರೀಕ್ಷೆಯು ಅ.06ರಂದು ಬೆಳಿಗ್ಗೆ 10 ರಿಂದ 12.30 ಗಂಟೆಯವರೆಗೆ ಹಾಗೂ ಮಧ್ಯಾಹ್ನ 02 ರಿಂದ 2.45 ಗಂಟೆವರೆಗೆ ವಿಜಯನಗರ ಜಿಲ್ಲೆಯ ಹೊಸಪೇಟೆಯ ಜಂಬುನಾಥ ಹಳ್ಳಿಯ "ಡಾ ಎ.ಪಿ.ಜೆ ಅಬ್ದುಲ ಕಲಾಂ, ಮಾದರಿ ವಸತಿ ಶಾಲೆ, ಈ ಪರೀಕ್ಷಾ ಕೇಂದ್ರದಲ್ಲಿ ನಡೆಯಲಿದ್ದು, ಈ >>4

# ರೋಗ ತಡೆಗೆ ಪೌಷ್ಟಿಕಾಹಾರ ಅವಶ್ಯಕ

### ಡಾ.ಪ್ರತಿಮಾ ಹೇಳಿಕೆ | ಮನೆಯಲ್ಲಿ ಸಿಗುವ ತರಕಾರಿ, ಹಣ್ಣು ಸೇವಿಸಿ ಆರೋಗ್ಯ ಕಾಯ್ದುಕೊಳ್ಳಿ



**ಹಂಪಿ ಟೈಮ್ಸ್ ಕೊಟ್ಟೂರು**

ಪೌಷ್ಟಿಕಾಹಾರ ಎಲ್ಲರ ಅಗತ್ಯತೆಯಾಗಿದೆ, ಪ್ರತಿಯೊಬ್ಬರು ಆರೋಗ್ಯದಿಂದರಲು ಹಾಗೂ ರೋಗಗಳನ್ನು ತಡೆಗಟ್ಟಲು ಜೀವನದಲ್ಲಿ ಪ್ರಗತಿ ಸಾಧಿಸಲು ಪೌಷ್ಟಿಕಾಹಾರದ ಅಗತ್ಯತೆ ಬಹುಮುಖ್ಯ ಎಂದು ಸಂಪನ್ಮೂಲ ವ್ಯಕ್ತಿ ಡಾ.ಪ್ರತಿಮಾ ಹೇಳಿದರು.

ಪಟ್ಟಣದ ತೊಟ್ಟಿಲು ಮಠದಲ್ಲಿ ಶುಕ್ರವಾರ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿಸಿ ಟ್ರಸ್ಟ್ ಕೊಟ್ಟೂರು,ತೊಟ್ಟಿಲು ಮಠದ ಕಾರ್ಯಕ್ಷೇತ್ರದಲ್ಲಿ ಜ್ಞಾನ ವಿಕಾಸ ಕಾರ್ಯಕ್ರಮದಡಿ ಆಯೋಜಿಸಿದ ಪೌಷ್ಟಿಕಾಹಾರ ಮತ್ತು ಮಹತ್ವ ಕುರಿತು ಸ್ತ್ರೀಯರಿಗೆ ಅರಿವು ಮೂಡಿಸಿದರು.

ಪೌಷ್ಟಿಕ ಆಹಾರಕ್ಕೆ ದುಬಾರಿ ಹಣ ಖರ್ಚು ಮಾಡುವ ಅವಶ್ಯಕತೆ ಇಲ್ಲ,ಮನೆಯಲ್ಲಿಯೇ ಇರುವಂತ ತರಕಾರಿ, ಸೊಪ್ಪು, ಸಿರಿಧಾನ್ಯ, ಹಣ್ಣುಗಳನ್ನು ನಿತ್ಯ ಕ್ರಮಬದ್ದವಾಗಿ ಸೇವಿಸಿದರೆ ಉತ್ತಮ ಆರೋಗ್ಯ ಕಾಯ್ದುಕೊಳ್ಳಬಹುದು ಎಂದು ಪೌಷ್ಟಿಕಾಹಾರದ ಮಹತ್ವದ ಬಗ್ಗೆ ವಿಸ್ತೃತವಾಗಿ ಮಾಹಿತಿ ನೀಡಿದರು.

ತೊಟ್ಟಿಲ ಮಠ ಕಮಿಟಿಯ ಅಧ್ಯಕ್ಷರು ಶಶಿಕಲಾ, ಒಕ್ಕೂಟದ ಅಧ್ಯಕ್ಷರು ಉಮಾದೇವಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಜ್ಞಾನವಿಕಾಸ ಸಮನ್ವಯ ಅಧಿಕಾರಿ ಸೌಮ್ಯ ಸೇವಾ ಪ್ರತಿನಿಧಿ ಪೂರ್ಣಿಮಾ ಕೇಂದ್ರದ ಸದಸ್ಯರು, ಉಪಸ್ಥಿತರಿದ್ದರು.

## ಪ್ರವೀಣ್ ಕಿತ್ತೂರಗೆ ಬಾಪೂಜಿ ಪ್ರಬಂಧ ಸ್ಪರ್ಧೆಯ ಬಹುಮಾನ



**ಹಂಪಿ ಟೈಮ್ಸ್ ಹೊಸಪೇಟೆ**

ಇಲ್ಲಿಗೆ ಸಮೀಪದ ಹಂಪಿ ಕನ್ನಡ ವಿವಿಯ ಸ್ನಾತಕೋತ್ತರ ವಿದ್ಯಾರ್ಥಿ ಪ್ರವೀಣ್ ನಿಂಗಪ್ಪ ಕಿತ್ತೂರ್ ಅವರು ಬರೆದ ಗಾಂಧೀಜಿಯವರ ಸ್ವರಾಜ್ ಮತ್ತು ಆರ್ಥಿಕ ಚಿಂತನೆಗಳು ಪ್ರಬಂಧವು ವಾರ್ತಾ ಇಲಾಖೆ ಏರ್ಪಡಿಸಿದ್ದ ರಾಜ್ಯ ಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆಯ ಪದವಿ/ಸ್ನಾತಕೋತ್ತರ ವಿಭಾಗದಲ್ಲಿ ಪ್ರಥಮ ಸ್ಥಾನ ಪಡೆದಿದೆ.

ಬೆಂಗಳೂರಿನ ವಾರ್ತಾಸೌಧದಲ್ಲಿ ಅಕ್ಟೋಬರ್ 2ರಂದು ನಡೆದ ಸಮಾರಂಭದಲ್ಲಿ ಬಹುಮಾನ ವಿಜೇತ ಪ್ರವೀಣ್ ಗೆ 31 ಸಾವಿರ ರೂ.ನಗದು ಹಾಗೂ ಪುರಸ್ಕಾರ ನೀಡಿ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಗೌರವಿಸಿದರು. ಈ ವೇಳೆ ಶಾಸಕ ರಿಜ್ವಾನ್ ಅರ್ಷದ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್, ವಾರ್ತಾ ಇಲಾಖೆಯ ಕಾರ್ಯದರ್ಶಿ ಡಾ.ಕೆ.ವಿ.ತ್ರಿಲೋಕಚಂದ್ರ, ಚಲನಚಿತ್ರ ಅಕಾಡೆಮಿ ಅಧ್ಯಕ್ಷ ಸಾಧುಕೋಕಿಲ, ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್, ವಾರ್ತಾ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ್, ಜಂಟಿ ನಿರ್ದೇಶಕರಾದ ಮಂಜುನಾಥ ಡೊಳ್ಳಿನ ಇದ್ದರು.


